**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ,**

**ಟಿ.ನರಸೀಪುರ**

**ದಿನಾಂಕ 6 ನೇ ನವೆಂಬರ್ 2025**

**ಸಿಸಿ ಸಂಖ್ಯೆ: 47/2025**

ಫಿರ್ಯಾದಿಃ : ರಾಜ್ಯದ ಪರವಾಗಿ ತಲಕಾಡು ಪೊಲೀಸ್ ಠಾಣೆ

ವಿರುದ್ಧ

ಆರೋಪಿಗಳು : 1. ಜಬಿ ಉಲ್ಲಾ,
ಬಿನ್ ಲೇಟ್ ಅಬ್ದುಲ್ ಸುಬಾನ್,
ವಯಸ್ಸು 54 ವರ್ಷ.

2. ನಸರುಲ್ಲಾ,
ಬಿನ್ ಲೇಟ್ ಅಬ್ದುಲ್ ಸುಬಾನ್,
ವಯಸ್ಸು 52 ವರ್ಷ.

3. ಜಹುರಾ ಬಾನು,
ಕೋಂ ಜಬಿ ಉಲ್ಲಾ,
ವಯಸ್ಸು 48 ವರ್ಷ.

ಎಲ್ಲರ ವಾಸಃ ಟಿ.ಮೆಗಡಾಹಳ್ಳಿ ಗ್ರಾಮ, ತಲಕಾಡು ಹೋಬಳಿ,
ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

**ದೋಷಾರೋಪಣೆ**

ಶ್ರೀಮತಿ ಎನ್.ನಿವೇದಿತಾ, 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು, ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.

ಮೊದಲನೆಯದಾಗಿ, ದಿಃ 14/03/2024 ರಂದು ಬೆಳಿಗ್ಗೆ 10.30 ಗಂಟೆ ಸಮಯದಲ್ಲಿ, ತಲಕಾಡು ಪೊಲೀಸ್ ಠಾಣಾ ಸರಹದ್ದು, ಟಿ.ಮೇಗಡಹಳ್ಳಿ ಗ್ರಾಮದಲ್ಲಿ, ಚಾಸಾ.1 ರವರಿಗೆ ಸೇರಿದ ವಾಸದ ಮನೆಯ ಬಳಿ ಇದ್ದ ಡ್ರೈನ್ ಅನ್ನು 1 ನೇ ಆರೋಪಿಯಾದ ನೀವು ಮುಚ್ಚುತ್ತಿದ್ದಾಗ, ಅದನ್ನು ಚಾಸಾ.1 ರವರು ಕೇಳಿದ್ದಕ್ಕೆ, ನಾನು ಮುಚ್ಚುತ್ತೇನೆ ನೀನು ಏನು ಮಾಡುತ್ತೀಯಾ ಎಂದು ಅವಾಚ್ಯ ಶಬ್ದಗಳಿಂದ ಬೈದು ಹಾಗೂ 2 ನೇ ಆರೋಪಿಯಾದ ನೀವೂ ಸಹ ಚಾಸಾ.1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ನಿಂದಿಸಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.504 ಸಹವಾಚಕ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, 1 ನೇ ಆರೋಪಿತರಾದ ನೀವು ಚಾಸಾ.1 ರವರೊಂದಿಗೆ ಜಗಳ ತೆಗೆದು, ಅವರನ್ನು ತಬ್ಬಿ ಹಿಡಿದುಕೊಂಡು ಹಾಗೂ 2 ನೇ ಆರೋಪಿಯಾದ ನೀವು ಚಾಸಾ.1 ರವರ ಬಟ್ಟೆಯನ್ನು ಹಿಡಿದುಕೊಂಡು ಎಳೆದಾಡಿ ಮುಂದೆ ಹೋಗದಂತೆ ಅಡ್ಡಗಟ್ಟಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.341 ಸಹವಾಚಕ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಮೂರನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, 1 ಮತ್ತು 2 ನೇ ಆರೋಪಿತರಾದ ನೀವು ಚಾಸಾ.1 ರವರೊಂದಿಗೆ ಜಗಳ ತೆಗೆದು, ಚಾಸಾ.1 ರವರಿಗೆ ಕೈಗಳಿಂದ ಹೊಡೆದು, ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.323 ಸಹವಾಚಕ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ನಾಲ್ಕನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, 1 ಮತ್ತು 2 ನೇ ಆರೋಪಿತರಾದ ನೀವು ಚಾಸಾ.1 ರವರೊಂದಿಗೆ ಜಗಳ ತೆಗೆದು, ಚಾಸಾ.1 ರವರಿಗೆ ಕೈಗಳಿಂದ ಹೊಡೆಯುತ್ತಿದ್ದಾಗ, 3 ನೇ ಆರೋಪಿಯಾದ ನೀವು 1 ಮತ್ತು 2 ನೇ ಆರೋಪಿತರಿಗೆ ಚಾಸಾ.1 ರವರನ್ನು ಬಿಡಬೇಡಿ ಹೊಡೆಯಿರಿ ಎಂದು ಪ್ರಚೋದನೆ ನೀಡಿದ್ದು, ಆ ಮೂಲಕ

ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.114 ಸಹವಾಚಕ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಪ್ರಶ್ನೆಃ ಈಗ ಓದಿ ಹೇಳಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಉತ್ತರಃ1 ನೇ ಆರೋಪಿಃ

ಉತ್ತರಃ2 ನೇ ಆರೋಪಿಃ

ಉತ್ತರಃ3 ನೇ ಆರೋಪಿಃ

ಪ್ರಶ್ನೆಃ ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ? ಅಥವಾ ವಿಚಾರಣೆಯಾಗಬೇಕಾ?

ಉತ್ತರಃ1 ನೇ ಆರೋಪಿಃ

ಉತ್ತರಃ2 ನೇ ಆರೋಪಿಃ

ಉತ್ತರಃ3 ನೇ ಆರೋಪಿಃ

(ಈ ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ವಿವರಿಸಿದ ನಂತರ ಅವರು ನೀಡಿದ ಉತ್ತರವನ್ನು ನಾನು ನನ್ನ ಸ್ವಂತ ಬರಹದಲ್ಲಿ ದಾಖಲು ಮಾಡಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ)

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ. ದ. ನ್ಯಾ ದಂ., ಟಿ.ನರಸೀಪುರ.**